# ದಾವಣಗೆರೆ ವಿಶ್ವವಿದ್ಯಾನಿಲಯ

**ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ–577007**

## ಸಿಂಡಿಕೇಟ್ ಅಸಾಮಾನ್ಯ ಸಭೆಯ ನಡಾವಳಿಗಳು

## ದಿನಾಂಕ:01.04.2025

# ದಾವಣಗೆರೆ ವಿಶ್ವವಿದ್ಯಾನಿಲಯ

**ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ–577007**

ದೂರವಾಣಿ ಸಂಖ್ಯೆ: 08192–208029, ಫ್ಯಾಕ್ಸ್ ಸಂಖ್ಯೆ: 08192–208008

**ಃ ವಿದ್ಯಾದಾನೇನ ವರ್ಧತೆ, ವಿದ್ಯಾ ವಿನಯೇನ ಶೋಭತೆ, ವಿದ್ಯಯಾ ವಿಂಧತೆ ಅಮಅಮೃತಂ ಃ**

**ಸಂಖ್ಯೆ:ದಾವಿವಿ/ಪ್ರಾಧಿಕಾರ/ಸಿಂ/728/2024–25/23** **ದಿನಾಂಕ:02.04.2025**

**ಇವರಿಗೆ,**

**ಮಾನ್ಯ ಸಿಂಡಿಕೇಟ್ ಸದಸ್ಯರುಗಳಿಗೆ.**

ಮಾನ್ಯರೆ,

**ವಿಷಯ : ದಿನಾಂಕ:1.04.2025 ರಂದು ಜರುಗಿದ ಸಿಂಡಿಕೇಟ್ ಅಸಾಮಾನ್ಯ ಸಭೆಯ ನಡಾವಳಿಗಳು.**

ಉಲ್ಲೇಖ : ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:02.04.2025

****

ವಿಶ್ವವಿದ್ಯಾನಿಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು ಅಧ್ಯಾಯ – III ರ ಪ್ರಕರಣ 16 (i) ರ ರೀತ್ಯ ದಿನಾಂಕ:01.04.2025 ರಂದು ವಿಶ್ವವಿದ್ಯಾನಿಲಯದ ಆಡಳಿತ ಭವನದ ಸಿಂಡಿಕೇಟ್ ಸಭಾಂಗಣದಲ್ಲಿ ಬೆಳಗ್ಗೆ 11:30 ಗಂಟೆಗೆ ಜರುಗಿದ ಸಿಂಡಿಕೇಟ್ ಅಸಾಮಾನ್ಯ ಸಭೆಯ ನಡಾವಳಿಗಳನ್ನು ಈ ಮೂಲಕ ತಮಗೆ ಕಳುಹಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 ರಡಿ ರಚಿಸಲಾಗಿರುವ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು – ಅಧ್ಯಾಯ–III ರ ಪ್ರಕರಣ 16 (i) ರ ರೀತ್ಯ ನಡಾವಳಿ ತಲುಪಿದ **ಏಳು ದಿನಗಳೊಳಗಾಗಿ** ತಮ್ಮಿಂದ ನಡಾವಳಿಗಳ ದಾಖಲಾತಿಯ ಬಗ್ಗೆ ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ ನಡಾವಳಿಗಳ ದಾಖಲಾತಿಯು ಸರಿಯಾಗಿದೆಯೆಂದು ಭಾವಿಸಲಾಗುವುದು.

ತಮ್ಮ ವಿಶ್ವಾಸಿ,

ಕುಲಸಚಿವರು
ಕುಲಸಚಿವರು
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ-577007

**ಪ್ರತಿಗಳು:**

1. ಮಾನ್ಯ ರಾಜ್ಯಪಾಲರ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು–560 001.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು– 560 001.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು), ಬಹುಮಹಡಿಗಳ ಕಟ್ಟಡ, ಬೆಂಗಳೂರು
4. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ನೃಪತುಂಗ ರಸ್ತೆ, ಬೆಂಗಳೂರು.
5. ಎಲ್ಲಾ ಸಿಂಡಿಕೇಟ್ ಸದಸ್ಯರುಗಳಿಗೆ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
6. ಕುಲಸಚಿವರು (ಪರೀಕ್ಷಾಂಗ), ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
7. ಹಣಕಾಸು ಅಧಿಕಾರಿಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
8. ನಿಕಾಯಗಳ ಡೀನರುಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
9. ಗ್ರಂಥಪಾಲಕರು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
10. ಕಾರ್ಯನಿರ್ವಾಹಕ ಇಂಜಿನಿಯರ್, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
11. ಉಪಕುಲಸಚಿವರು, ಶೈಕ್ಷಣಿಕ/ಮಾಸನಿ/ಅಭಿವೃದ್ಧಿ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
12. ನಿರ್ದೇಶಕರು, ಸಿ.ಡಿ.ಸಿ/ಐಕ್ಯೂಎಸಿ/ಪಿ.ಎಂ.ಇ./ದೈಹಿಕ ಶಿಕ್ಷಣ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
13. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ, ದೃಶ್ಯಕಲಾ ಕಾಲೇಜು, ದಾವಣಗೆರೆ–577004
14. ಸಂಯೋಜನಾಧಿಕಾರಿಗಳು, ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಕೇಂದ್ರ, ರಾ.ಹೆ.13, ಗುಡ್ಡದ ರಂಗವ್ವನಹಳ್ಳಿ, ಚಿತ್ರದುರ್ಗ–577502
15. ಸಂಯೋಜನಾಧಿಕಾರಿಗಳು, ವಿಶ್ವವಿದ್ಯಾನಿಲಯದ ಸರ್ಕಾರಿ ಪ್ರಥಮ ದರ್ಜೆ ಘಟಕ ಕಾಲೇಜು, ತುರುವನೂರು, ಚಿತ್ರದುರ್ಗ–577517
16. ಸಂಯೋಜನಾಧಿಕಾರಿಗಳು, ವಿಶ್ವವಿದ್ಯಾನಿಲಯದ ಸರ್ಕಾರಿ ಪ್ರಥಮ ದರ್ಜೆ ಘಟಕ ಕಾಲೇಜು, ಹರಿಯಬ್ಬೆ, ಚಿತ್ರದುರ್ಗ–577546
17. ಆಪ್ತ ಕಾರ್ಯಾಲಯ, ಮಾನ್ಯ ಕುಲಪತಿಗಳು/ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
18. ಕಛೇರಿ ಪ್ರತಿ.

# ದಾವಣಗೆರೆ ವಿಶ್ವವಿದ್ಯಾನಿಲಯ

## ವಿಶ್ವವಿದ್ಯಾನಿಲಯದಲ್ಲಿ ದಿನಾಂಕ:01.04.2025 ರಂದು ಜರುಗಿದ ಸಿಂಡಿಕೇಟ್ ಅಸಾಮಾನ್ಯ ಸಭೆಯ ನಡಾವಳಿಗಳು

**ಸಭೆಯಲ್ಲಿ ಹಾಜರಿದ್ದ ಸದಸ್ಯರು:**

1. ಪ್ರೊ. ಬಿ.ಡಿ ಕುಂಬಾರ., ಮಾನ್ಯ ಕುಲಪತಿಗಳು : ಅಧ್ಯಕ್ಷರು
2. ಡಾ. ಕೇಶವ ಹೆಚ್. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಶಿವಮೊಗ್ಗ : ಸದಸ್ಯರು
3. ಪ್ರೊ. ಶಶಿಧರ ಆರ್. ಡೀನರು, ವಾಣಿಜ್ಯ ನಿಕಾಯ : ಸದಸ್ಯರು
4. ಶ್ರೀಮತಿ ಶಾರದಾ ಪಾಟೀಲ., ಮಾನ್ಯ ರಾಜ್ಯಪಾಲರಿಂದ ನಾಮನಿರ್ದೇಶಿತರು : ಸದಸ್ಯರು
5. ಡಾ. ಉಮೇಶ್ ಬಿ. ಎನ್., ಮಾನ್ಯ ರಾಜ್ಯಪಾಲರಿಂದ ನಾಮನಿರ್ದೇಶಿತರು : ಸದಸ್ಯರು
6. ಡಾ. ಕೆ.ಟಿ. ನಾಗರಾಜ ನಾಯ್ಕ., ಪ್ರಾಚಾರ್ಯರು : ಸದಸ್ಯರು
7. ಡಾ. ಬಾಬು ಕುಮಾರ್ ಓ., ಪ್ರಾಚಾರ್ಯರು : ಸದಸ್ಯರು
8. ಡಾ. ಗಿರೀಶ್ ಟಿ., ಪ್ರಾಚಾರ್ಯರು : ಸದಸ್ಯರು
9. ಶ್ರೀಮತಿ ಉಷಾ ಎಸ್., ಆರ್, ಪ್ರಾಚಾರ್ಯರು : ಸದಸ್ಯರು
10. ಶ್ರೀ ದ್ಯಾಮಪ್ಪ., ಮಾನ್ಯ ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರು : ಸದಸ್ಯರು
11. ಶ್ರೀ ತಿಪ್ಪೇಸ್ವಾಮಿ ಹೆಚ್., ಮಾನ್ಯ ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರು : ಸದಸ್ಯರು
12. ಡಾ. ಜಿ. ಕೆ. ಪ್ರೇಮ., ಮಾನ್ಯ ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರು : ಸದಸ್ಯರು
13. ಶ್ರೀ ಶಬೀರ್ ಅಲಿಖಾನ್., ಮಾನ್ಯ ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರು : ಸದಸ್ಯರು
14. ಶ್ರೀ ಪ್ರಶಾಂತ್ ಆರ್. ಟಿ., ಮಾನ್ಯ ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರು : ಸದಸ್ಯರು
15. ಡಾ. ಪ್ರಶಾಂತ ಎನ್. ಸಿ., ಮಾನ್ಯ ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರು : ಸದಸ್ಯರು
16. ಪ್ರೊ. ರವಿಕುಮಾರ್ ಪಾಟೀಲ್ ಹೆಚ್.ಎಸ್., ಪ್ರಾಧ್ಯಾಪಕರು : ಸದಸ್ಯರು
17. ಡಾ. ರಮೇಶ್ ಸಿ. ಕೆ., ಕುಲಸಚಿವರು (ಪರೀಕ್ಷಾಂಗ) : ಸದಸ್ಯರು
18. ಡಾ. ಶಶಿಧರ್ ಆರ್., ಕುಲಸಚಿವರು, ಆಡಳಿತ (ಪ್ರಭಾರೆ) : ಸದಸ್ಯ ಕಾರ್ಯದರ್ಶಿ

ನಿಯಮಾನುಸಾರ ಕನಿಷ್ಠ ಅಗತ್ಯ ಸಂಖ್ಯೆ 08 ಕ್ಕಿಂತ ಹೆಚ್ಚು ಅಂದರೆ 18 ಸದಸ್ಯರುಗಳು ಹಾಜರಿರುವುದನ್ನು ಖಚಿತಪಡಿಸಿಕೊಂಡು ನಿಗದಿತ ಸಮಯಕ್ಕೆ ಸರಿಯಾಗಿ ಸಭೆಯನ್ನು ಪ್ರಾರಂಭಿಸಲಾಯಿತು. ಮೊದಲನೆಯದಾಗಿ ಕುಲಸಚಿವರು ಮಾನ್ಯ ಕುಲಪತಿಗಳನ್ನು ಸಭೆಗೆ ಸ್ವಾಗತಿಸಿ ಅಧ್ಯಕ್ಷತೆಯನ್ನು ವಹಿಸುವಂತೆ ಕೋರಿದರು ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರುಗಳಿಗೆ ಸ್ವಾಗತವನ್ನು ಕೋರಿದರು. ತದನಂತರ, ಸಭೆಯ ಕಲಾಪಗಳನ್ನು ಈ ಮುಂದಿನಂತೆ ಪ್ರಾರಂಭಿಸಲಾಯಿತು.

ಕುಲಸಚಿವರು ಕುಲಪತಿಗಳು

| ಪರೀಕ್ಷಾಂಗ ವಿಭಾಗ – 1 | |
|---|---|
| ವಿಷಯ ಸಂಖ್ಯೆ: | ಸಿಂ.01(a)/(04/25) |

## –:ಟಿಪ್ಪಣಿ:–

ವಿಷಯ: ವಿಶ್ವವಿದ್ಯಾನಿಲಯದಲ್ಲಿ ಏರ್ಪಡಿಸಲಾಗಿರುವ 12ನೇ ವಾರ್ಷಿಕ ಘಟಿಕೋತ್ಸವದ ಸಮಾರಂಭದಲ್ಲಿ Ph.D/Gold Medal/Rank Certificate ಹಾಗೂ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗಳನ್ನು ಪ್ರದಾನ ಮಾಡುವ ಪ್ರಸ್ತಾವನೆಗೆ ಅನುಮೋದನೆ ನೀಡುವ ಬಗ್ಗೆ.

*****

ವಿಶ್ವವಿದ್ಯಾನಿಲಯದಲ್ಲಿ ದಿನಾಂಕ:02.04.2025 ರಂದು ನಡೆಯಲಿರುವ 12ನೇ ವಾರ್ಷಿಕ ಘಟಿಕೋತ್ಸವ ಸಂಬಂಧವಾಗಿ, ಸ್ನಾತಕ/ಸ್ನಾತಕೋತ್ತರ ಪದವಿಗಳ ಹಾಗೂ ಡಾಕ್ಟರ್ ಆಫ್ ಫಿಲಾಸಫಿ (ಪಿ.ಹೆಚ್‌ಡಿ.) ಪದವಿ ಪ್ರಧಾನ ಮಾಡಲಿರುವ ಈ ಕೆಳಕಂಡ ವಿವರ ಮಾಹಿತಿಗಳನ್ನು ದಿನಾಂಕ:01.04.2025 ರಂದು ಏರ್ಪಡಿಸಲಾಗಿರುವ ಸಿಂಡಿಕೇಟ್ ಅಸಾಮಾನ್ಯ ಸಭೆಗೆ ಅವಗಾಹನೆಗಾಗಿ ಹಾಗೂ ಅನುಮೋದನೆಗಾಗಿ ಮಂಡಿಸಿದೆ.

1. **ಡಾಕ್ಟರ್ ಆಫ್ ಫಿಲಾಸಫಿ (ಪಿ.ಹೆಚ್‌ಡಿ.) ಪದವಿ ಪ್ರಧಾನ ವಿವರ:**

| ಕ್ರ. ಸಂ. | ವಿವರ | ಗಂಡು | ಹೆಣ್ಣು | ಒಟ್ಟು ವಿದ್ಯಾರ್ಥಿಗಳು |
|---|---|---|---|---|
| 1 | ಸಂಶೋಧನಾರ್ಥಿಗಳು (ಪಿಹೆಚ್.ಡಿ) | 36 | 21 | 57 |

2. **ಸ್ನಾತಕ / ಸ್ನಾತಕೋತ್ತರ ಪದವಿ ನೀಡಲಾಗುತ್ತಿರುವ ವಿದ್ಯಾರ್ಥಿಗಳ ವಿವರ:**

| ಕ್ರ. ಸಂ. | ವಿವರ | ಗಂಡು | ಹೆಣ್ಣು | ಒಟ್ಟು ವಿದ್ಯಾರ್ಥಿಗಳು | ಶೇಕಡವಾರು ಫಲಿತಾಂಶ |
|---|---|---|---|---|---|
| 1 | ಸ್ನಾತಕ ಪದವಿ | 4484 | 7645 | 12129 | 61.14% |
| 2 | ಸ್ನಾತಕೋತ್ತರ ಪದವಿ | 727 | 1192 | 1919 | 96.14% |
| | **ಒಟ್ಟು** | **5211** | **8837** | **14048** | |

3. **ಸ್ನಾತಕ / ಸ್ನಾತಕೋತ್ತರ ಪದವಿಗಳಲ್ಲಿ ಸ್ವರ್ಣ ಪದಕ ಪಡೆದ ವಿದ್ಯಾರ್ಥಿಗಳ ವಿವರ:**

| ಕ್ರ. ಸಂ. | ವಿವರ | ಗಂಡು | ಹೆಣ್ಣು | ಒಟ್ಟು ವಿದ್ಯಾರ್ಥಿಗಳು | ಒಟ್ಟು ಸ್ವರ್ಣ ಪದಕಗಳು |
|---|---|---|---|---|---|
| 1 | ಸ್ನಾತಕ ಪದವಿ | 05 | 09 | 14 | **24** |
| 2 | ಸ್ನಾತಕೋತ್ತರ ಪದವಿ | 06 | 26 | 32 | **63** |
| | **ಒಟ್ಟು** | **11** | **35** | **46** | **87** |

ಪು.ತಿ.ನೋ..

ಕುಲಸಚಿವರು

ಕುಲಪತಿಗಳು

4. **ರ್‍ಯಾಂಕ್ ಪಡೆದ ವಿದ್ಯಾರ್ಥಿಗಳ ವಿವರ (01 ರಿಂದ 03ನೇ ರ್‍ಯಾಂಕ್):**

| ಕ್ರ. ಸಂ. | ವಿವರ | ಸ್ನಾತಕ ಪದವಿ | ಸ್ನಾತಕೋತ್ತರ ಪದವಿ | ಒಟ್ಟು ವಿದ್ಯಾರ್ಥಿಗಳು |
|---|---|---|---|---|
| 1 | ಪ್ರಥಮ ರ್‍ಯಾಂಕ್ | 12 | 28 | **40** |
| 2 | ದ್ವಿತೀಯ ಮತ್ತು ತೃತೀಯ ರ್‍ಯಾಂಕ್ | 19 | 49 | **68** |

**:: ನಿರ್ಣಯ ::**

ವಿಶ್ವವಿದ್ಯಾನಿಲಯದ 12ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ವಿವಿಧ ವಿಷಯಗಳಲ್ಲಿ ಪಿಹೆಚ್.ಡಿ., ಸ್ವರ್ಣ ಪದಕ(Gold Medal), ರ್‍ಯಾಂಕ್ ಪ್ರಮಾಣ ಪತ್ರ(Rank Certificate) ಹಾಗೂ ವಿವಿಧ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರಗಳನ್ನು ಪ್ರದಾನ ಮಾಡುವ ಸಲುವಾಗಿ ಈ ಮೇಲ್ಕಂಡ ಪ್ರಸ್ತಾವನೆಗೆ ಸಭೆಯು ಒಮ್ಮತದಿಂದ ಅನುಮೋದನೆ ನೀಡಿತು.

ಕುಲಸಚಿವರು

ಕುಲಪತಿಗಳು

| ಪರೀಕ್ಷಾಂಗ ವಿಭಾಗ – 2 | |
|---|---|
| ವಿಷಯ ಸಂಖ್ಯೆ: | ಸಿಂ.01(b)/(04/25) |

## –:ಟಿಪ್ಪಣಿ:–

ವಿಷಯಃ ವಿಶ್ವವಿದ್ಯಾನಿಲಯದ 12ನೇ ವಾರ್ಷಿಕ ಘಟಿಕೋತ್ಸವದಲ್ಲಿ ಗೌರವಾನ್ವಿತ ರಾಜ್ಯಪಾಲರಿಂದ ನಾಮನಿರ್ದೇಶನಗೊಂಡಿರುವ ಗೌರವ ಡಾಕ್ಟರೇಟ್ ಪದವಿ ಪ್ರಶಸ್ತಿಗೆ ಪ್ರದಾನರಾಗಿರುವ ಮಹನೀಯರ ಪಟ್ಟಿಗೆ ಅನುಮೋದನೆ ನೀಡುವ ಕುರಿತು.

*****

ವಿಶ್ವವಿದ್ಯಾನಿಲಯದ 12ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡುವ ಸಂಬಂಧ ವಿಶ್ವವಿದ್ಯಾನಿಲಯಕ್ಕೆ ಸ್ವೀಕೃತಗೊಂಡ 05 (CV) ಮನವಿಗಳನ್ನು ದಿನಾಂಕ:21.01.2025 ಸಿಂಡಿಕೇಟ್ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು ಘನತೆವೆತ್ತ ಮಾನ್ಯ ರಾಜ್ಯಪಾಲರ ಅನುಮೋದನೆಗಾಗಿ ಸಲ್ಲಿಸಲಾಗಿತ್ತು.

ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಘನತೆವೆತ್ತ ಮಾನ್ಯ ರಾಜ್ಯಪಾಲರು ಈ ಕೆಳಕಂಡ ಗಣ್ಯರುಗಳಿಗೆ 12ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಗೌರವ ಡಾಕ್ಟರೇಟ್ ಪದವಿಗಳನ್ನು ಪ್ರದಾನ ಮಾಡಲು ಅನುಮೋದನೆ ನೀಡಿರುತ್ತಾರೆ.

**12ನೇ ವಾರ್ಷಿಕ ಘಟಿಕೋತ್ಸವದ ಗೌರವ ಡಾಕ್ಟರೇಟ್ ಪದವಿ ವಿವರ**

| ಕ್ರ. ಸಂ. | ಹೆಸರು | ಗೌರವ ಡಾಕ್ಟರೇಟ್ ಪದವಿ ಪ್ರದಾನ | ಸಾಧನೆ ಕ್ಷೇತ್ರದ ಮಾಹಿತಿ | ವಿಳಾಸ |
|---|---|---|---|---|
| 1. | ಶ್ರೀ ಜಗದ್ಗುರು ನಿರಂಜನಾನಂದಪುರಿ ಸ್ವಾಮೀಜಿ | D.Litt | ಸಮಾಜ ಸೇವೆ | ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠ, ಕಾಗಿನೆಲೆ, ಬ್ಯಾಡಗಿ ತಾಲ್ಲೂಕು, ಹಾವೇರಿ–581110 |
| 2. | ಶ್ರೀ ಎಸ್.ಎ. ರವೀಂದ್ರನಾಥ್ | D.Litt | ಸಮಾಜ ಸೇವೆ | ಮಾಜಿ ಶಾಸಕರು ಮತ್ತು ಸಚಿವರು, ದಾವಣಗೆರೆ ಉತ್ತರ ವಿಧಾನಸಭಾ ಕ್ಷೇತ್ರ, ಬಿನ್ ಬಸಪ್ಪ ಶಿರಮಗೊಂಡನಹಳ್ಳಿ, ದಾವಣಗೆರೆ. |
| 3. | ಪ್ರೊ. ಎಸ್.ಆರ್. ನಿರಂಜನ | D.Sc | ಶಿಕ್ಷಣ | ಮಾನ್ಯ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ ಆವರಣ, ಬೆಂಗಳೂರು–560009 |

ಸದರಿ ವಿಷಯವನ್ನು ದಿನಾಂಕ:01.04.2025 ರಂದು ಏರ್ಪಡಿಸಲಾಗಿರುವ ಸಿಂಡಿಕೇಟ್ ಅಸಾಮಾನ್ಯ ಸಭೆಯ ಅವಗಾಹನೆಗೆ ಹಾಗೂ ಅನುಮೋದನೆಗಾಗಿ ಮಂಡಿಸಲಾಗಿದೆ.

**ನಿರ್ಣಯ**

ವಿಶ್ವವಿದ್ಯಾನಿಲಯದ 12ನೇ ವಾರ್ಷಿಕ ಘಟಿಕೋತ್ಸವದಲ್ಲಿ ಗೌರವಾನ್ವಿತ ರಾಜ್ಯಪಾಲರಿಂದ ನಾಮನಿರ್ದೇಶನಗೊಂಡಿರುವ ಗೌರವ ಡಾಕ್ಟರೇಟ್ ಪದವಿ ಪ್ರಶಸ್ತಿಗೆ ಪ್ರದಾನರಾಗಿರುವ ಈ ಮೇಲ್ಕಂಡ ಮಹನೀಯರಿಗೆ ಗೌರವ ಡಾಕ್ಟರೇಟ್ ಪ್ರಶಸ್ತಿ ಪ್ರದಾನ ಮಾಡಲು ಸಭೆಯು ಒಮ್ಮತದಿಂದ ಒಪ್ಪಿಗೆ ನೀಡಿತು.

ಕುಲಸಚಿವರು ಕುಲಪತಿಗಳು

| ಮಾ.ಸ.ನಿ. ವಿಭಾಗ – 3 | |
|---|---|
| ವಿಷಯ ಸಂಖ್ಯೆ: | ಸಿಂ.02(a)/(04/25) |

**–ಃಟಿಪ್ಪಣಿಃ–**

**ವಿಷಯಃ ಯು.ಜಿ.ಸಿ. 2018ರ ಯು.ಜಿ.ಸಿ.–ಸಿಎಎಸ್ ನಿಯಮಾವಳಿಯಂತೆ ವೃತ್ತಿ ಪದೋನ್ನತಿ ನೀಡುವ ಬಗ್ಗೆ.**

*****

ಸಹ ಪ್ರಾಧ್ಯಾಪಕರ ಹುದ್ದೆಯಿಂದ ಪ್ರಾಧ್ಯಾಪಕ (Academic Level-13A to Academic Level-14) ಹುದ್ದೆಗೆ ಮತ್ತು ಸಹಾಯಕ ಪ್ರಾಧ್ಯಾಪಕ ಹುದ್ದೆಯ (Academic Level-10 to Academic Level-11)ಗೆ ವೃತ್ತಿ ಪದೋನ್ನತಿ ನೀಡಲು ಯು.ಜಿ.ಸಿ–2018 ರ ಸಿ.ಎ.ಎಸ್. ನಿಯಮಾವಳಿಯಂತೆ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಅದರಂತೆ, ಒಟ್ಟು 04 (3+1) ಅರ್ಜಿಗಳು ಸ್ವೀಕೃತಗೊಂಡಿದ್ದು, ಸದರಿ ಅರ್ಜಿಗಳನ್ನು ಪರಿಶೀಲಿಸಿ ಮೌಲ್ಯಮಾಪನ ನಡೆಸಿ ಎ.ಜಿ.ಪಿ. ಮಂಜೂರಾತಿ ಮಾಡಲು ಬಾಹ್ಯ ವಿಷಯ ತಜ್ಞರುಗಳು ದಿನಾಂಕ:29.03.2025ರಂದು ಮೌಲ್ಯಮಾಪನ ಮತ್ತು ಸಂದರ್ಶನ ನಡೆಸಿ ವರದಿಯನ್ನು ನೀಡಿರುತ್ತಾರೆ. ಸಹ ಪ್ರಾಧ್ಯಾಪಕರ ಹುದ್ದೆಯಿಂದ ಪ್ರಾಧ್ಯಾಪಕರುಗಳಿಗೆ ಮತ್ತು ಸಹಾಯಕ ಪ್ರಾಧ್ಯಾಪಕರಿಗೆ ವೃತಿ ಪದೋನ್ನತಿ ನೀಡುವ ದಿನಾಂಕ:01.04.2025 ರಂದು ಏರ್ಪಡಿಸಲಾಗಿರುವ ಸಿಂಡಿಕೇಟ್ ಅಸಾಮಾನ್ಯ ಸಭೆಯ ಅವಗಾಹನೆಗೆ ಹಾಗೂ ಅನುಮೋದನೆಗಾಗಿ ಮಂಡಿಸಲಾಗಿದೆ.

**"Table-A"**

**List of CAS Promotion from Associate Professor to Professor (Academic Level-13A to Academic Level-14)**

| Sl.no | Name of the Candidate | Name of the Department | Date of Eligibility |
|---|---|---|---|
| 1 | Dr. Jayaramaiah V | Kannada | 30.01.2025 |
| 2 | Dr. Vishwanatha H | Kannada | 30.01.2025 |
| 3 | Dr. Mallikarjuna K | Kannada | 04.02.2025 |

**"Table-B"**

**List of CAS Promotion Assistant Professor (Academic Level-10 to Academic Level-11)**

| Sl.no | Name of the Candidate | Name of the Department | Date of Eligibility |
|---|---|---|---|
| 1 | Dr. Rupesha Kumar R | Kannada | 15.02.2025 |

**: ನಿರ್ಣಯ :**

ಈ ಮೇಲ್ಕಂಡ **Table-A** ನಲ್ಲಿರುವ ಸಹ ಪ್ರಾಧ್ಯಾಪಕರಿಗೆ ಸಹ ಪ್ರಾಧ್ಯಾಪಕರ ಹುದ್ದೆಯಿಂದ ಪ್ರಾಧ್ಯಾಪಕರ ಹುದ್ದೆಗೆ ವೃತ್ತಿ ಪದೋನ್ನತಿ ನೀಡಲು ಹಾಗೂ **Table-B** ನಲ್ಲಿರುವ ಸಹಾಯಕ ಪ್ರಾಧ್ಯಾಪಕರಿಗೆ Academic Level 10 ರಿಂದ Academic Level 11 ಕ್ಕೆ ಅರ್ಹತಾ ದಿನಾಂಕದಿಂದ ವೃತ್ತಿ ಪದೋನ್ನತಿ ನೀಡಲು ಸಭೆಯು ನಿರ್ಣಯಿಸಿ, ಆರ್ಥಿಕ ಸೌಲಭ್ಯವನ್ನು ಸಿಂಡಿಕೇಟ್ ಸಭೆಯ ದಿನಾಂಕದಿಂದ ಪಾವತಿಸಲು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಹಣಕಾಸು ವಿಭಾಗ – 4 | |
|---|---|
| ವಿಷಯ ಸಂಖ್ಯೆ: | ಸಿಂ.03(a)/(04/25) |

## –:ಟಿಪ್ಪಣಿ:–

**ವಿಷಯ: 2024–25ನೇ ಸಾಲಿನ ನಾಲ್ಕನೇ ಹಣಕಾಸು ಸಮಿತಿ ಸಭೆಯ ನಡಾವಳಿಗಳಿಗೆ ಅನುಮೋದನೆ ನೀಡುವ ಕುರಿತು.**

*****

ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು – ಇಲ್ಲಿ ದಿನಾಂಕ:25.03.2025 ರಂದು ಜರುಗಿದ ವಿಶ್ವವಿದ್ಯಾನಿಲಯದ 2024–25ನೇ ಆರ್ಥಿಕ ವರ್ಷದ **ನಾಲ್ಕನೇ ಹಣಕಾಸು ಸಮಿತಿ** ಸಭೆಯಲ್ಲಿ ಚರ್ಚಿಸಿ ಕೈಗೊಂಡ ನಿರ್ಣಯಗಳ ನಡಾವಳಿಗಳನ್ನು ದಿನಾಂಕ:01.04.2025 ರಂದು ಏರ್ಪಡಿಸಲಾಗಿರುವ ಸಿಂಡಿಕೇಟ್ ಅಸಾಮಾನ್ಯ ಸಭೆಯ ಅವಗಾಹನೆಗೆ ಹಾಗೂ ಅನುಮೋದನೆಗಾಗಿ ಮಂಡಿಸಲಾಗಿದೆ.

**: ನಿರ್ಣಯ :**

ವಿಶ್ವವಿದ್ಯಾನಿಲಯದ 2024–25ನೇ ಸಾಲಿನ ನಾಲ್ಕನೇ ಹಣಕಾಸು ಸಮಿತಿ ಸಭೆಯ ನಡಾವಳಿಗಳ ಕುರಿತು ಚರ್ಚಿಸಿ ನಡಾವಳಿಗಳನ್ನು ಸಭೆಯು ಒಮ್ಮತದಿಂದ ಅನುಮೋದಿಸಿತು.

ಕೊನೆಯಲ್ಲಿ ಕುಲಸಚಿವರು(ಆಡಳಿತ) ಇವರ ವಂದನಾರ್ಪಣೆಯೊಂದಿಗೆ ಸಭೆಯು ಮುಕ್ತಾಯಗೊಂಡಿತು.

ಕುಲಸಚಿವರು

ಕುಲಪತಿಗಳು